# ವಿಜ್ಞಾನ ವಸ್ತುಪ್ರದರ್ಶನದಲ್ಲಿ ಶರಣಬಸವ ವಿವಿ ಛಾಪು

## ಫಿಪ್ರೊನಿಲ್ ರಸಾಯನಿಕ ದುಷ್ಪರಿಣಾಮ ಕುರಿತಾದ ಸಂಶೋಧನಾ ಪ್ರದರ್ಶಿಕೆಗೆ ಅತ್ಯುತ್ತಮ ಯೋಜನಾ ಪ್ರಶಸ್ತಿ

• **ಕನ್ನಡಪ್ರಭ ವಾರ್ತೆ** ಕಲಬುರಗಿ

ಶರಣಬಸವ ವಿವಿ ವಿದ್ಯಾರ್ಥಿಗಳು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆಎಸ್‌ಸಿಎಸ್‌ಟಿ) ತಮ್ಮದೇ ವಿವಿ ಅಂಗಳದಲ್ಲಿ ಆಯೋಜಿಸಿದ್ದ, ರಾಜ್ಯ ಮಟ್ಟದ 47ನೇ ಸರಣಿ ವಿದ್ಯಾರ್ಥಿ ಯೋಜನಾ ಕಾರ್ಯಕ್ರಮದಲ್ಲಿ (ಎಸ್‌ಪಿಪಿ) ದಾಖಲೆಯ ಎರಡು ಅತ್ಯುತ್ತಮ ಯೋಜನಾ ಪ್ರಶಸ್ತಿಗಳನ್ನು ಗೆಲ್ಲುವ ಮೂಲಕ ವಿಶ್ವವಿದ್ಯಾಲಯಕ್ಕೆ ಹೆಮ್ಮೆ ತಂದಿದ್ದಾರೆ.

ವಿವಿಯ ಎಂಎಸ್‌ಸಿ ಪ್ರಾಣಿಶಾಸ್ತ್ರ ವಿಭಾಗ ವಿದ್ಯಾರ್ಥಿಗಳು ಪ್ರಾಣಿಗಳ ಮೇಲೆ ಹರಡುವ ಕೀಟ ನಿಯಂತ್ರಣಕ್ಕಾಗಿ, ಕೃಷಿ ಕ್ಷೇತ್ರಗಳಲ್ಲಿ ಹಾಗೂ ಮನೆಗಳಲ್ಲಿ ವ್ಯಾಪಕವಾಗಿ ಬಳಸಲಾಗುವ ಫಿಪ್ರೋನಿಲ್ ರಾಸಾಯನಿಕದ ದುಷ್ಪರಿಣಾಮಗಳ ಬಗ್ಗೆ ಮಂಡಿಸಿದ ಸಂಶೋಧನಾ ಯೋಜನೆಗಾಗಿ ಬಹುಮಾನ ಪಡೆಯಲಿದ್ದಾರೆ.

ಎಂಎಸ್ಸಿ (ಪ್ರಾಣಿಶಾಸ್ತ್ರ) ವಿಭಾಗದ ವಿದ್ಯಾರ್ಥಿಗಳಾದ ಹಧಿಕಾ ಸುಮೇರಾ, ತನುಜಾ ಹಿರೋಳ್ಳಿ, ನವೀನ್ ಕುಮಾರ್‌ಸಿಂದಗಿ ಮತ್ತು ಸಮೀರ್‌ಪರಪರೋಶ್ ಅವರ ನಾಲ್ಕು ಸದಸ್ಯರ ವಿದ್ಯಾರ್ಥಿಗಳ ತಂಡ ಅತ್ಯುತ್ತಮ ಯೋಜನಾ ಪ್ರಶಸ್ತಿ ಗಿಟ್ಟಿಸಿದೆ.

ಮಾರ್ಗದರ್ಶಕರಾದ ವಿಶ್ವಜಿತ್ ಬಿ ದಾರೆಕರ್, ಬಸವರಾಜೇಶ್ವರಿ ಇಂದೂರ್ ಅವರು, ಈ ಯೋಜನೆಯನ್ನುಮುಂದಿನಹಂತಕ್ಕೆಕೊಂಡೊಯ್ದು, ಬೆಂಗಳೂರಿನಐಐಎಸ್‌ಸಿಯಸಹಯೋಗದೊಂದಿಗೆ ನ್ಯೂರೋಸಿಸ್ಟಮ್ ಮತ್ತು ನಡವಳಿಕೆಯ ಅಂಶಗಳಲ್ಲಿ ಫಿಪ್ರೊನಿಲ್ ಬಳಕೆಯ ಪರಿಣಾಮವನ್ನು ಸಂಶೋಧಿಸಲು ಜೀನೋಮಿಕ್ ಅಧ್ಯಯನ ನಡೆಸಲಾಗುವುದು ಎಂದು ಹೇಳಿದ್ದಾರೆ.



ಶರಣಬಸವ ವಿವಿ ಎಂಎಸ್ಸಿ (ಪ್ರಾಣಿಶಾಸ್ತ್ರ) ವಿಭಾಗದ ವಿದ್ಯಾರ್ಥಿಗಳಾದ ಹಧಿಕಾ ಸುಮೇರಾ, ತನುಜಾ ಹಿರೋಳ್ಳಿ, ನವೀನ್ ಕುಮಾರ್ ಸಿಂದಗಿ ಮತ್ತು ಸಮೀರ್ ಪರಪರೋಶ್ ನಾಲ್ಕು ವಿದ್ಯಾರ್ಥಿಗಳ ತಂಡ ಅತ್ಯುತ್ತಮ ಯೋಜನಾ ಪ್ರಶಸ್ತಿ.



ಶರಣಬಸವ ವಿವಿ ಎಂ.ಟೆಕ್ (ಡಿಜಿಟಲ್ ಕಮ್ಯುನಿಕೇಷನ್ ಮತ್ತು ನೆಟ್‌ವರ್ಕ್) 3 ನೇ ಸೆಮಿಸ್ಟರ್‌ವಿದ್ಯಾರ್ಥಿನಿ ಪ್ರತೀಕ್ಷಾ ಮಾನೆ ಅವರು ಅತ್ಯುತ್ತಮ ಪ್ರಶಸ್ತಿಯನ್ನು ಗೆದ್ದಿದ್ದಾರೆ.

**ಗಮನ ಸೆಳೆದ ಹ್ಯಾಂಡ್ ಸ್ಯಾನಿಟೈಜರ್:**

ಇದೇ ವಿವಿಯ ಎಂ.ಟೆಕ್ (ಡಿಜಿಟಲ್ ಕಮ್ಯುನಿಕೇಷನ್ ಮತ್ತು ನೆಟ್‌ವರ್ಕ್) 3ನೇ ಸೆಮಿಸ್ಟರ್‌ವಿದ್ಯಾರ್ಥಿನಿ ಪ್ರತೀಕ್ಷಾ ಮಾನೆ ಅವರು ಅತ್ಯುತ್ತಮಪ್ರಶಸ್ತಿಯನ್ನುಗೆದ್ದಿದ್ದಾರೆ.ಸ್ವಯಂಚಾಲಿತ ಮಂಜು ಆಧಾರಿತ ಹ್ಯಾಂಡ್ ಸ್ಯಾನಿಟೈಸರ್ ನಿರ್ಮಿಸಿದ್ದರು. ಇದು ನೀರಿನ ಬಳಕೆಯನ್ನು ಕಡಿಮೆ ಮಾಡುತ್ತದೆ. ವಿದ್ಯಾರ್ಥಿಯು ರೂಪಿಸಿದ ತಂತ್ರಜ್ಞಾನವು ಲಭ್ಯವಿರುವ ದ್ರವ ಮತ್ತು ಪೇಸ್ಟ್ ಆಧಾರಿತ ಸ್ಯಾನಿಟೈಸರ್‌ಅನ್ನು ಬಳಸಿ ಕೈಗಳನ್ನು ಸ್ಯಾನಿಟೈಜ್ ಮಾಡಲು ಸ್ವಲ್ಪ ನೀರನ್ನು ತುಂಬಿಸುವ ಮೂಲಕ ಅದನ್ನು ಮಂಜಾಗಿ ಪರಿವರ್ತಿಸುತ್ತದೆ.

ಈ ಯೋಜನೆಯು ವ್ಯಾಪಕ ಬಳಕೆಗಾಗಿ ಅದರ ಸರಳ ತಂತ್ರಜ್ಞಾನಕ್ಕಾಗಿ ವಿವಿಧ ಪ್ರಮುಖ ಸಂಸ್ಥೆಗಳಿಂದ ಹಾಗೂ ಪರಿಣತರಿಂದ ಪ್ರಶಂಸೆಯನ್ನು ಪಡೆಯಿತು. 1000 ರುಪಾಯಿ ವೆಚ್ಚದಲ್ಲಿ ತಯಾರಿಸಲಾದ ಈ ಸ್ವಯಂಚಾಲಿತ ಹ್ಯಾಂಡ್ ಸ್ಯಾನಿಟೈಸರ್‌ಗಳನ್ನು ಸಿನಿಮಾ ಹಾಲ್‌ಗಳು, ಫಂಕ್ಷನ್ ಹಾಲ್‌ಗಳು ಮತ್ತು ಹೆಚ್ಚಿನ ಸಂಖ್ಯೆಯ ಜನರನ್ನು ಆಕರ್ಷಿಸುವ ಸ್ಥಳಗಳಲ್ಲಿ ಅಳವಡಿಸಬಹುದಾಗಿದೆ. ಸೌರ ಫಲಕಗಳನ್ನು ಬಳಸುವ ಅದೇ ಸ್ಯಾನಿಟೈಸರ್‌ನ ಬೆಲೆ ಸ್ವಲ್ಪ ಹೆಚ್ಚಾಗಿರಲಿದೆ.

ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶನ್ ಇಂಜಿನಿಯರಿಂಗ್ ವಿಭಾಗದ ವನಿತಾ ಕಾಬಾ, ಲಕ್ಷ್ಮಿ ಪಾಟೀಲ್ ಮಾರ್ಗದರ್ಶಕ ಶಿಕ್ಷಕರಾಗಿದ್ದಾರೆ.

# ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿ ಪಡೆದುಕೊಂಡ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್ ಆಫ್ ಇಂಜಿನಿಯರಿಂಗ್





ಕಲಬುರಗಿ:ಜು.11: ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆಎಸ್‌ಸಿಎಸ್‌ಟಿ) ಆಯೋಜಿಸಿದ್ದ 47ನೇ ಸರಣಿ ವಿದ್ಯಾರ್ಥಿ ಯೋಜನೆ ಕಾರ್ಯಕ್ರಮದಲ್ಲಿ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್ ಆಫ್ ಇಂಜಿನಿಯರಿಂಗ್, ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಸ್ತುತಿ ಮತ್ತು ಯೋಜನೆಗಳ ಪ್ರದರ್ಶನದಲ್ಲಿ ಪ್ರತಿಷ್ಠಿತ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದುಕೊಂಡಿದೆ.

ಭಾರತೀಯ ವಿಜ್ಞಾನ ಸಂಸ್ಥೆ, ರಾಷ್ಟ್ರೀಯ ವೈಮಾನಿಕ ಪ್ರಯೋಗಾಲಯ (ಎನ್‌ಎಎಲ್) ಮತ್ತು ಇತರ ಉನ್ನತ ಶಿಕ್ಷಣ ಹಾಗೂ ಸಂಶೋಧನೆಯ ಪ್ರಮುಖ ಸಂಸ್ಥೆಗಳ ಹಿರಿಯ ವಿಜ್ಞಾನಿಗಳನ್ನು ಒಳಗೊಂಡಿರುವ ತೀರ್ಪುಗಾರರ ಸಮಿತಿಯು, ವಿವಿಧ ಕಾಲೇಜುಗಳು ಮತ್ತು ಉನ್ನತ ಅಧ್ಯಯನ ಸಂಸ್ಥೆಗಳು ಸಲ್ಲಿಸಿದ ಯೋಜನೆಗಳ ಸಂಖ್ಯೆ ಸೇರಿದಂತೆ ಹಲವಾರು ವಿಷಯಗಳನ್ನು ಪರಿಗಣನೆಗೆ ತೆಗೆದುಕೊಂಡಿತು. ಪ್ರತಿ ವರ್ಷ ರಾಜ್ಯದ ಒಂದು ಕಾಲೇಜಿಗೆ ನೀಡುವ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯ ಆಯ್ಕೆಯನ್ನು ಅಂತಿಮಗೊಳಿಸುವ ಮೊದಲು ಯೋಜನೆಗಳ ಗುಣಮಟ್ಟ, ಪ್ರಸ್ತುತಿ ಮತ್ತು ಇತರ ಅಂಶಗಳನ್ನು ಪರಿಶೀಲಿಸಲಾಯಿತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕಲಬುರಗಿಯ ಪ್ರಾದೇಶಿಕ ನಿರ್ದೇಶಕ ಪ್ರೊ. ಬಸವರಾಜ ಗದಗೆ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಸೇರಿದಂತೆ ಇತರ ಗಣ್ಯರು, ಐಐಎಸ್‌ಸಿಯ ಹಿರಿಯ ಅಧ್ಯಾಪಕರು ಹಾಗೂ ಕೆಎಸ್‌ಸಿಎಸ್‌ಟಿ ಕಾರ್ಯದರ್ಶಿ ಪ್ರೊ. ಅಶೋಕ್ ಎಂ. ರಾಯಚೂರು, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಯು. ಟಿ. ವಿಜಯ್ ಸೇರಿಕೊಂಡು, ದಯಾನಂದ ಸಾಗರ್ ಇಂಜಿನಿಯರಿಂಗ್ ಕಾಲೇಜಿಗೆ ಪ್ರತಿಷ್ಠಿತ ಪ್ರಶಸ್ತಿ ಲಭಿಸಿರುವುದಕ್ಕೆ ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್.ಜಿ. ಡೊಳ್ಳೇಗೌಡರ ಮತ್ತಿತರ ಗಣ್ಯರು ಶ್ಲಾಘಿಸಿ ಅಭಿನಂದಿಸಿದರು.

25 ಅತ್ಯುತ್ತಮ ಪೋಸ್ಟರ್ ಪ್ರಸ್ತುತಿ ಯೋಜನೆಗಳು ಮತ್ತು 23 ಅತ್ಯುತ್ತಮ ಪ್ರದರ್ಶನ ಯೋಜನೆಗಳನ್ನು ಒಳಗೊಂಡಂತೆ ರಾಜ್ಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ಒಟ್ಟು 48 ಅತ್ಯುತ್ತಮ ಪ್ರಾಜೆಕ್ಟ್‌ಗಳನ್ನು ಅಂತಿಮಗೊಳಿಸಿ ಗಣ್ಯರು ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ನೀಡಿದರು. ಬೆಂಗಳೂರಿನ ರಾಮಯ್ಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಹಾಗೂ ದಯಾನಂದ ಕಾಲೇಜ್ ಆಫ್ ಟೆಕ್ನಾಲಜಿ ಜೊತೆಗೂಡಿ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದಿದ್ದು, ತಲಾ ಮೂರು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಅತ್ಯುತ್ತಮ ಯೋಜನೆಗಳಲ್ಲಿ ಗಮನ ಸೆಳೆದ ಶಿಕ್ಷಣ ಸಂಸ್ಥೆಗಳಲ್ಲಿ, ಶರಣಬಸವ ವಿಶ್ವವಿದ್ಯಾಲಯ ಕಲಬುರಗಿ ಸೇರಿದೆ. ಆರ್ ವಿ ಎಂಜಿನಿಯರಿಂಗ್ ಕಾಲೇಜು ಬೆಂಗಳೂರು, ಜಿ ಎಂ ಇನ್ಸ್ಟಿಟ್ಯೂಟ್ ಟೆಕ್ನಾಲಜಿ, ದಾವಣಗೆರೆ, ಮಂಗಳೂರು ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಇಂಜಿನಿಯರಿಂಗ್ ಮೂಡಬಿದಿರೆ, ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್, ಮಂಗಳೂರು, ಮತ್ತು ಬಿಎಲ್‌ಡಿಇಎ'ಸ್ ವಿ ಪಿ ಡಾ. ಪಿ ಜಿ ಹಳಕಟ್ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಟೆಕ್ನಾಲಜಿ ವಿಜಯಪುರ ತಲಾ ಎರಡು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆದುಕೊಂಡವು.

47 ನೇ ಸರಣಿಯ ಎಸ್‌ಪಿಪಿ ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಸ್ತುತಿ ಮತ್ತು ಪ್ರಾಜೆಕ್ಟ್ ಎಕ್ಸಿಬಿಷನ್‌ಗೆ ಆಯ್ಕೆಯಾದ ಒಟ್ಟು 354 ಪ್ರಾಜೆಕ್ಟ್‌ಗಳಲ್ಲಿ 210 ಪ್ರಾಜೆಕ್ಟ್‌ಗಳನ್ನು ಕರ್ನಾಟಕದ ವಿವಿಧ ಭಾಗಗಳಿಂದ 142 ಕಾಲೇಜುಗಳಿಂದ ಪ್ರದರ್ಶನದಲ್ಲಿ ಪ್ರದರ್ಶಿಸಲಾಯಿತು ಮತ್ತು ಈ ಪ್ರಾಜೆಕ್ಟ್‌ಗಳನ್ನು ಸಿದ್ಧಪಡಿಸಿದ 350 ವಿದ್ಯಾರ್ಥಿಗಳು ತಮ್ಮ ಮಾರ್ಗದರ್ಶಕ-ಶಿಕ್ಷಕರೊಂದಿಗೆ ಪ್ರದರ್ಶಿಸಿದರು. ಪ್ರದರ್ಶನದಲ್ಲಿ ತೀರ್ಪುಗಾರರು ಈ ಎಲ್ಲಾ ಯೋಜನೆಗಳನ್ನು ವೀಕ್ಷಿಸಿದರು.

ಈ ಎರಡು ದಿನಗಳ ರಾಜ್ಯ ಮಟ್ಟದ ವಸ್ತುಪ್ರದರ್ಶನದಲ್ಲಿ ಆತಿಥೇಯ ಶರಣಬಸವ ವಿಶ್ವವಿದ್ಯಾಲಯವು ಪ್ರದರ್ಶಿಸಿದ ಅತ್ಯುತ್ತಮ ಸೌಕರ್ಯಗಳು ಮತ್ತು ಆತಿಥ್ಯಕ್ಕಾಗಿ ಹಾಗೂ ಎರಡು ದಿನಗಳ ಅವಧಿಯಲ್ಲಿ ಭಾಗವಹಿಸುವವರು ಮತ್ತು ಅತಿಥಿಗಳ ಪ್ರತಿಯೊಂದು ಅಗತ್ಯವನ್ನು ಕಾಳಜಿ ವಹಿಸಿದ್ದಕ್ಕಾಗಿ ಪ್ರೊಫೆಸರ್ ಅಶೋಕ್ ಎಂ ರಾಯಚೂರು ಮತ್ತು ಡಾ ಯು ಟಿ ವಿಜಯ್ ಸೇರಿದಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳು ಪ್ರಶಂಸಿಸಿದರು.

ಈ ಸಮಾರಂಭದಲ್ಲಿ ಪ್ರೊ. ಬಸವರಾಜ ಗದಗೆಯವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಎರಡು ವರ್ಷಕ್ಕೊಮ್ಮೆಯಾದರೂ ಇಂತಹ ರಾಜ್ಯ ಮಟ್ಟದ ವಿಜ್ಞಾನ ವಸ್ತುಪ್ರದರ್ಶನವನ್ನು ಆಯೋಜಿಸಿ ಈ ಭಾಗದ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಪ್ರೋತ್ಸಾಹಿಸುವಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಪ್ರೊ. ಅನಿಲಕುಮಾರ ಬಿಡವೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪ್ರೊ. ನಾಗಬಸವಣ್ಣ ಗುರುನಗೋಳ ವಂದಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಡೈರೆಕ್ಟರ್ ಡಾ. ಎ. ಡಿ. ಮೈತ್ರಿ, ಕುಲಸಚಿವ ಪ್ರೊ. ಎಸ್. ಜಿ. ಡೊಳ್ಳೇಗೌಡರ್, ಡೀನ್ ಡಾ. ಲಕ್ಷ್ಮೀ ಪಾಟೀಲ್ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಸ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಪ್ರೊ. ಕಿರಣ್ ಮಾಕಾ ಸೇರಿದಂತೆ ಇತರ ಪ್ರಮುಖರು ವೇದಿಕೆ ಮೇಲಿದ್ದರು.

## ಒಳಮೀಸಲಾತಿ ಸ್ವಾಗತಾರ್ಹ: ತೇಲಂಗಿ



### ದಯಾನಂದ ಸಾಗರ್ ಎಂಜಿನಿಯರಿಂಗ್ ಕಾಲೇಜಿಗೆ 'ಬೆಸ್ಟ್ ಪರ್ಫಾರ್ಮಿಂಗ್ ಕಾಲೇಜು' ಪ್ರಶಸ್ತಿ

# 38 ಸಂಸ್ಥೆಗಳ 48 ಮಾದರಿಗಳಿಗೆ ಪ್ರಶಸ್ತಿ

ಪ್ರಜಾವಾಣಿ ವಾರ್ತೆ

ಕಲಬುರಗಿ: ಇಲ್ಲಿನ ಶರಣ ಬಸವ ವಿಶ್ವವಿದ್ಯಾಲಯ ಸೇರಿದಂತೆ 38 ಶಿಕ್ಷಣ ಸಂಸ್ಥೆಗಳ 48 ಪ್ರಾಜೆಕ್ಟ್‌ಗಳು ರಾಜ್ಯಮಟ್ಟದ 47ನೇ ಸರಣಿ ವಿದ್ಯಾರ್ಥಿಗಳ ಪೋಸ್ಟರ್ ಪ್ರಸ್ತುತಿ ಮತ್ತು ಯೋಜನೆಗಳ ಪ್ರದರ್ಶನದಲ್ಲಿ 'ವರ್ಷದ ಅತ್ಯುತ್ತಮ ಪ್ರಾಜೆಕ್ಟ್' ಬಹುಮಾನಕ್ಕೆ ಪಾತ್ರವಾದವು. ಇದರಲ್ಲಿ 25 ಪೋಸ್ಟರ್ ಪ್ರೆಸೆಂಟೇಷನ್ ಪ್ರಾಜೆಕ್ಟ್‌ಗಳು (ಪೋಸ್ಟರ್ ಪ್ರಸ್ತುತಿ) ಹಾಗೂ 23 ಎಕ್ಸಿಬಿಷನ್ ಪ್ರಾಜೆಕ್ಟ್‌ಗಳು (ಯೋಜನೆಗಳ ಪ್ರದರ್ಶನ) ಸೇರಿವೆ.

ಇಲ್ಲಿನ ಶರಣ ಬಸವ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆಎಸ್‌ಸಿಎಸ್‌ಟಿ) ಜಂಟಿಯಾಗಿ ಆಯೋಜಿಸಿದ್ದ ಎರಡು ದಿನಗಳ ಪ್ರಾಜೆಕ್ಟ್ ಕಾರ್ಯಕ್ರಮದಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆಗಾಗಿ ಬೆಂಗಳೂರಿನ ದಯಾನಂದ ಸಾಗರ ಎಂಜಿನಿಯರಿಂಗ್ ಕಾಲೇಜು 'ಬೆಸ್ಟ್ ಪರ್ಫಾರ್ಮಿಂಗ್ ಕಾಲೇಜು' ಪ್ರಶಸ್ತಿ ಬಾಚಿಕೊಂಡಿತು.

ಈ ಕಾರ್ಯಕ್ರಮದಲ್ಲಿ 146 ಕಾಲೇಜುಗಳ ವಿದ್ಯಾರ್ಥಿಗಳು ಹಲವು ವಿಭಾಗಗಳಲ್ಲಿ 210 ಮಾದರಿಗಳನ್ನು ಪ್ರದರ್ಶಿಸಿದ್ದರು. ಈ ಪೈಕಿ 48 ಪ್ರಾಜೆಕ್ಟ್‌ಗಳು 2023-24ನೇ ಸಾಲಿನ ವರ್ಷದ ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗೆ ಭಾಜನವಾದವು. ಪ್ರಶಸ್ತಿ ಗೆದ್ದ ತಂಡಗಳ ಪ್ರತಿ ವಿದ್ಯಾರ್ಥಿಗೆ ತಲಾ ₹ 1,500 ಬಹುಮಾನ ನೀಡಲಾಯಿತು.

ಪ್ರಶಸ್ತಿ ಪ್ರದಾನ ಸಮಾರಂಭಕ್ಕೂ ಮುನ್ನ ಈ ಕಾರ್ಯಕ್ರಮದಲ್ಲಿ ತೀರ್ಪುಗಾರರಾಗಿ ಪಾಲ್ಗೊಂಡಿದ್ದ ವಿಜ್ಞಾನಿಗಳು, ಪ್ರಾಧ್ಯಾಪಕರು, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಪರಿಷತ್ತಿನ ಅಧಿಕಾರಿಗಳು, ಸಿಬ್ಬಂದಿ, ಕಾರ್ಯಕ್ರಮದ ಯಶಸ್ವಿಗೆ ರಚಿಸಿದ್ದ ವಿವಿಧ ಸಮಿತಿಗಳ ಸಿಬ್ಬಂದಿಯನ್ನು ಗೌರವಿಸಲಾಯಿತು.

ಶರಣಬಸವ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಅನಿಲಕುಮಾರ ಬಿಡವೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಹಣಕಾಸು ಅಧಿಕಾರಿ ಪ್ರೊ.ಕಿರಣ್ ಮಾಕಾ ಸ್ವಾಗತಿಸಿದರು. ಕೆಎಸ್‌ಸಿಎಸ್‌ಟಿ ಕಾರ್ಯನಿರ್ವಾಹಕ ಕಾರ್ಯದರ್ಶಿ ಯು.ವಿ. ವಿಜಯ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರೊ.ನಾಗಬಸವಣ್ಣ ಗುರುಗೋಳ ವಂದಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ನಿರ್ದೇಶಕರಾದ ಪ್ರೊ.ವಿ.ಡಿ.ಮೈತ್ರಿ, ಕುಲಸಚಿವ ಪ್ರೊ. ಎಸ್. ಜಿ.ಡೊಳ್ಳೇಗೌಡರ್, ಡೀನ್ ಲಕ್ಷ್ಮಿ ಪಾಟೀಲ ಮಾಕಾ, ಕುಲಸಚಿವ (ಮೌಲ್ಯಮಾಪನ) ಎಸ್.ಎಚ್.ಹೊನ್ನಳ್ಳಿ ಉಪಸ್ಥಿತರಿದ್ದರು.



ರಾಜ್ಯಮಟ್ಟದ ವಿಜ್ಞಾನ ಮಾದರಿಗಳ ಪ್ರದರ್ಶನದಲ್ಲಿ ಪ್ರಶಸ್ತಿಗೆ ಭಾಜನರಾದ ಶರಣ ಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರೊ.ಬಸವರಾಜ ಗಾದ್ಗೆ ಬಹುಮಾನ ವಿತರಿಸಿದರು. ಬಸವರಾಜ ದೇಶಮುಖ, ಪ್ರೊ.ಅಶೋಕ ರಾಯಚೂರ, ಪ್ರೊ. ವಿ.ಡಿ. ಮೈತ್ರಿ, ಯು.ಟಿ. ವಿಜಯ, ಡೀನ್ ಲಕ್ಷ್ಮಿ ಪಾಟೀಲ ಮಾಕಾ, ಕಿರಣ ಮಾಕಾ ಪಾಲ್ಗೊಂಡಿದ್ದರು —ಪ್ರಜಾವಾಣಿ ಚಿತ್ರ

**ಕೆಎಸ್‌ಸಿಎಸ್‌ಟಿ ಪ್ರತಿ ಎರಡು ವರ್ಷಕ್ಕೊಮ್ಮೆಯದರೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಇಂಥ ವಿಜ್ಞಾನ ಮತ್ತು ಸಂಶೋಧನಾ ಕಾರ್ಯಕ್ರಮ ಆಯೋಜಿಸಬೇಕು. ಅದರಿಂದ ಇಲ್ಲಿನ ವಿದ್ಯಾರ್ಥಿಗಳ ಪ್ರತಿಭಾ ಪ್ರದರ್ಶನಕ್ಕೆ ಪ್ರೇರಣೆ ಸಿಗಲಿದೆ**

**ಪ್ರೊ.ಬಸವರಾಜ ಗಾದ್ಗೆ,** ಪ್ರಾದೇಶಿಕ ನಿರ್ದೇಶಕ ವಿಟಿಯು, ಕಲಬುರಗಿ ಕೇಂದ್ರ

**ವಿದ್ಯಾರ್ಥಿಗಳು, ಬೋಧಕರು ಪ್ರಾಜೆಕ್ಟ್‌ಗಳ ಮೂಲ ಅಂಶಗಳ ಬಗ್ಗೆ ಒತ್ತು ನೀಡಬೇಕು. ಪ್ರಾಜೆಕ್ಟ್ ರೂಪಿಸುವಾಗ ಎರಡು ಭಿನ್ನ ವಿಭಾಗಗಳ ವಿದ್ಯಾರ್ಥಿಗಳು ಸೇರಿ ಸಿದ್ಧಪಡಿಸಲು ಯತ್ನಿಸಬೇಕು**

**ಪ್ರೊ.ಅಶೋಕ ಎಂ.ರಾಯಚೂರ**
ಕೆಎಸ್‌ಸಿಎಸ್‌ಟಿ ಕಾರ್ಯದರ್ಶಿ

**ಶರಣಬಸವ ವಿ.ವಿಗೆ ಎರಡು ಪ್ರಶಸ್ತಿ:** ಶರಣ ಬಸವ ವಿಶ್ವವಿದ್ಯಾಲಯಕ್ಕೆ ಡಿಜಿಟಲ್ ಕಮ್ಯುನಿಕೇಷನ್ ಅಂಡ್ ನೆಟ್‌ವರ್ಕಿಂಗ್ ವಿಭಾಗ ಹಾಗೂ ಪ್ರಾಣಿ ವಿಜ್ಞಾನ ವಿಭಾಗದಲ್ಲಿ ಪ್ರದರ್ಶಿಸಿದ ತಲಾ ಒಂದೊಂದು ಮಾದರಿಗೆ 'ವರ್ಷದ ಅತ್ಯುತ್ತಮ ಪ್ರಾಜೆಕ್ಟ್' ರಾಜ್ಯಮಟ್ಟದ ಪ್ರಶಸ್ತಿ ಸಂದಿತು.

# ಪ್ರಶಸ್ತಿ ಪಡೆದುಕೊಂಡ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್



ಕಲಬುರಗಿ: ಶನಿವಾರ ಕಲಬುರಗಿ ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪಾ ಸಭಾಮಂಟಪದಲ್ಲಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆಎಸ್‌ಸಿಎಸ್‌ಟಿ) ಆಯೋಜಿಸಿದ್ದ ೪೭ನೇ ಸರಣಿ ವಿದ್ಯಾರ್ಥಿ ಯೋಜನೆ ಕಾರ್ಯಕ್ರಮದಲ್ಲಿ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್ ಆಫ್ ಇಂಜಿನಿಯರಿಂಗ್, ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಸ್ತುತಿ ಮತ್ತು ಯೋಜನೆಗಳ ಪ್ರದರ್ಶನದಲ್ಲಿ ಪ್ರತಿಷ್ಠಿತ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದುಕೊಂಡಿದೆ.

ಭಾರತೀಯ ವಿಜ್ಞಾನ ಸಂಸ್ಥೆ, ರಾಷ್ಟ್ರೀಯ ವೈಮಾನಿಕ ಪ್ರಯೋಗಾಲಯ (NAL) ಮತ್ತು ಇತರ ಉನ್ನತ ಶಿಕ್ಷಣ ಹಾಗೂ ಸಂಶೋಧನೆಯ ಪ್ರಮುಖ ಸಂಸ್ಥೆಗಳ ಹಿರಿಯ ವಿಜ್ಞಾನಿಗಳನ್ನು ಒಳಗೊಂಡಿರುವ ತೀರ್ಪುಗಾರರ ಸಮಿತಿಯು, ವಿವಿಧ ಕಾಲೇಜುಗಳು ಮತ್ತು ಉನ್ನತ ಅಧ್ಯಯನ ಸಂಸ್ಥೆಗಳು ಸಲ್ಲಿಸಿದ ಯೋಜನೆಗಳ ಸಂಖ್ಯೆ ಸೇರಿದಂತೆ ಹಲವಾರು ವಿಷಯಗಳನ್ನು ಪರಿಗಣನೆಗೆ ತೆಗೆದುಕೊಂಡಿತು. ಪ್ರತಿ ವರ್ಷ ರಾಜ್ಯದ ಒಂದು ಕಾಲೇಜಿಗೆ ನೀಡುವ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯ ಆಯ್ಕೆಯನ್ನು ಅಂತಿಮಗೊಳಿಸುವ ಮೊದಲು ಯೋಜನೆಗಳ ಗುಣಮಟ್ಟ, ಪ್ರಸ್ತುತಿ ಮತ್ತು ಇತರ ಅಂಶಗಳನ್ನು ಪರಿಶೀಲಿಸಲಾಯಿತು.

ರಾಜ್ಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ಒಟ್ಟು ೪೮ ಅತ್ಯುತ್ತಮ ಪ್ರಾಜೆಕ್ಟ್‌ಗಳನ್ನು ಅಂತಿಮಗೊಳಿಸಿ ಗಣ್ಯರು ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ನೀಡಿದರು.

ಬೆಂಗಳೂರಿನ ರಾಮಯ್ಯ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಹಾಗೂ ದಯಾನಂದ ಕಾಲೇಜ್ ಆಫ್ ಟೆಕ್ನಾಲಜಿ ಜೊತೆಗೂಡಿ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದಿದ್ದು,



ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕಲಬುರಗಿಯ ಪ್ರಾದೇಶಿಕ ನಿರ್ದೇಶಕ ಪ್ರೊ. ಬಸವರಾಜ ಗದಗೆ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಸೇರಿದಂತೆ ಇತರ ಗಣ್ಯರು, ಐಐಎಸ್‌ಸಿಯ ಹಿರಿಯ ಅಧ್ಯಾಪಕರು ಹಾಗೂ ಕೆಎಸ್‌ಸಿಎಸ್‌ಟಿ ಕಾರ್ಯದರ್ಶಿ ಪ್ರೊ. ಅಶೋಕ್ ಎಂ. ರಾಯಚೂರು, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಯು. ಟಿ. ವಿಜಯ್ ಸೇರಿಕೊಂಡು, ದಯಾನಂದ ಸಾಗರ್ ಇಂಜಿನಿಯರಿಂಗ್ ಕಾಲೇಜಿಗೆ ಪ್ರತಿಷ್ಠಿತ ಪ್ರಶಸ್ತಿ ಲಭಿಸಿರುವುದಕ್ಕೆ ಶರಣಬಸವ ವಿಶ್ವ ವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್.ಜಿ. ಡೊಳ್ಳೇಗೌಡರ್ ಮತ್ತಿತರ ಗಣ್ಯರು ಕೈಜೋಡಿಸಿ ಅಭಿನಂದಿಸಿದರು.

೨೫ ಅತ್ಯುತ್ತಮ ಪೋಸ್ಟರ್ ಪ್ರಸ್ತುತಿ ಯೋಜನೆಗಳು ಮತ್ತು ೨೩ ಅತ್ಯುತ್ತಮ ಪ್ರದರ್ಶನ ಯೋಜನೆಗಳನ್ನು ಒಳಗೊಂಡಂತೆ ತಲಾ ಮೂರು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಅತ್ಯುತ್ತಮ ಯೋಜನೆಗಳಲ್ಲಿ ಗಮನ ಸೆಳೆದ ಶಿಕ್ಷಣ ಸಂಸ್ಥೆಗಳಲ್ಲಿ, ಶರಣಬಸವ ವಿಶ್ವವಿದ್ಯಾಲಯ ಕಲಬುರಗಿ ಸೇರಿವೆ.

ಆರ್ ವಿ ಎಂಜಿನಿಯರಿಂಗ್ ಕಾಲೇಜು ಬೆಂಗಳೂರು, ಜಿ ಎಂ ಇನ್ಸ್‌ಟಿಟ್ಯೂಟ್ ಟೆಕ್ನಾಲಜಿ, ದಾವಣಗೆರೆ, ಮಂಗಳೂರು ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಇಂಜಿನಿಯರಿಂಗ್ ಮೂಡುಬಿದಿರೆ, ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್, ಮಂಗಳೂರು, ಮತ್ತು BLDEA'S V P Dr PG ಹಲಕಟ್ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಟೆಕ್ನಾಲಜಿ ವಿಜಯಪುರ ತಲಾ ಎರಡು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆದುಕೊಂಡವು.

೪೭ ನೇ ಸರಣಿಯ ಎಸ್‌ಪಿಪಿ ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಸ್ತುತಿ ಮತ್ತು ಪ್ರಾಜೆಕ್ಟ್ ಎಕ್ಸಿಬಿಷನ್‌ಗೆ ಆಯ್ಕೆಯಾದ ಒಟ್ಟು ೬೫೪ ಪ್ರಾಜೆಕ್ಟ್‌ಗಳಲ್ಲಿ ೨೧೦ ಪ್ರಾಜೆಕ್ಟ್‌ಗಳನ್ನು ಕರ್ನಾಟಕದ ವಿವಿಧ ಭಾಗಗಳಿಂದ ೧೪೨ ಕಾಲೇಜುಗಳಿಂದ ಪ್ರದರ್ಶನದಲ್ಲಿ ಪ್ರದರ್ಶಿಸಲಾಯಿತು ಮತ್ತು ಈ ಪ್ರಾಜೆಕ್ಟ್‌ಗಳನ್ನು ಸಿದ್ಧಪಡಿಸಿದ ೬೫೦ ವಿದ್ಯಾರ್ಥಿಗಳು ತಮ್ಮ ಮಾರ್ಗದರ್ಶಕ-ಶಿಕ್ಷಕರೊಂದಿಗೆ ಪ್ರದರ್ಶಿಸಿದರು. ಪ್ರದರ್ಶನದಲ್ಲಿ ತೀರ್ಪುಗಾರರು ಈ ಎಲ್ಲಾ ಯೋಜನೆಗಳನ್ನು ವೀಕ್ಷಿಸಿದರು.

ಈ ಎರಡು ದಿನಗಳ ರಾಜ್ಯ ಮಟ್ಟದ ವಸ್ತುಪ್ರದರ್ಶನದಲ್ಲಿ ಆತಿಥೇಯ ಶರಣಬಸವ ವಿಶ್ವವಿದ್ಯಾಲಯವು ಪ್ರದರ್ಶಿಸಿದ ಅತ್ಯುತ್ತಮ ಸೌಕರ್ಯಗಳು ಮತ್ತು ಆತಿಥ್ಯಕ್ಕಾಗಿ ಹಾಗೂ ಎರಡು ದಿನಗಳ ಅವಧಿಯಲ್ಲಿ ಭಾಗವಹಿಸುವವರು ಮತ್ತು ಅತಿಥಿಗಳ ಪ್ರತಿಯೊಂದು ಅಗತ್ಯವನ್ನು ಕಾಳಜಿ ವಹಿಸಿದ್ದಕ್ಕಾಗಿ ಪ್ರೊಫೆಸರ್ ಅಶೋಕ್ ಎಂ ರಾಯಚೂರು ಮತ್ತು ಡಾ ಯು ಟಿ ವಿಜಯ್ ಸೇರಿದಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳು ಪ್ರಶಂಸಿಸಿದರು.

ಈ ಸಮಾರಂಭದಲ್ಲಿ ಪ್ರೊ. ಬಸವರಾಜ ಗದಗೆಯವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಎರಡು ವರ್ಷಕ್ಕೊಮ್ಮೆಯಾದರೂ ಇಂತಹ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನವನ್ನು ಆಯೋಜಿಸಿ ಈ ಭಾಗದ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಪ್ರೋತ್ಸಾಹಿಸುವಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಪ್ರೊ. ಅನಿಲಕುಮಾರ ಬಿಡವೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು, ಪ್ರೊ. ನಾಗಬಸವಣ್ಣ ಗುರುಗೋಳ ವಂದಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಡೈರೆಕ್ಟರ್ ಡಾ. ವಿ. ಡಿ. ಮೈತ್ರಿ, ಕುಲಸಚಿವ ಪ್ರೊ. ಎಸ್. ಜಿ. ಡೊಳ್ಳೇಗೌಡರ್, ಡೀನ್ ಡಾ. ಲಕ್ಷ್ಮೀ ಪಾಟೀಲ್ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಪ್ರೊ. ಕಿರಣ್ ಮಾಕಾ ಸೇರಿದಂತೆ ಇತರ ಪ್ರಮುಖರು ವೇದಿಕೆ ಮೇಲಿದ್ದರು.

# ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿ ಪಡೆದುಕೊಂಡ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್ ಆಫ್ ಇಂಜಿನಿಯರಿಂಗ್.



ಕಲಬುರಗಿ: ಶನಿವಾರ ಕಲಬುರಗಿ ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪಾ ಸಭಾಮಂಟಪದಲ್ಲಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ (ಕೆಎಸ್‌ಸಿಎಸ್‌ಟಿ) ಆಯೋಜಿಸಿದ್ದ 47ನೇ ಸರಣಿ ವಿದ್ಯಾರ್ಥಿ ಯೋಜನೆ ಕಾರ್ಯಕ್ರಮದಲ್ಲಿ ಬೆಂಗಳೂರಿನ ದಯಾನಂದ ಸಾಗರ್ ಕಾಲೇಜ್ ಆಫ್ ಇಂಜಿನಿಯರಿಂಗ್, ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಶಸ್ತಿ ಮತ್ತು ಯೋಜನೆಗಳ ಪ್ರದರ್ಶನದಲ್ಲಿ ಪ್ರತಿಷ್ಠಿತ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದುಕೊಂಡಿದೆ.

ಭಾರತೀಯ ವಿಜ್ಞಾನ ಸಂಸ್ಥೆ, ರಾಷ್ಟ್ರೀಯ ವೈಮಾನಿಕ ಪ್ರಯೋಗಾಲಯ (ಓಎಎಲ್) ಮತ್ತು ಇತರ ಉನ್ನತ ಶಿಕ್ಷಣ ಹಾಗೂ ಸಂಶೋಧನೆಯ ಪ್ರಮುಖ ಸಂಸ್ಥೆಗಳ ಹಿರಿಯ ವಿಜ್ಞಾನಿಗಳನ್ನು ಒಳಗೊಂಡಿರುವ ತೀರ್ಪುಗಾರರ ಸಮಿತಿಯು, ವಿವಿಧ ಕಾಲೇಜುಗಳು ಮತ್ತು ಉನ್ನತ ಅಧ್ಯಯನ ಸಂಸ್ಥೆಗಳು ಸಲ್ಲಿಸಿದ ಯೋಜನೆಗಳ ಸಂಖ್ಯೆ ಸೇರಿದಂತೆ ಹಲವಾರು ವಿಷಯಗಳನ್ನು ಪರಿಗಣನೆಗೆ ತೆಗೆದುಕೊಂಡಿತು. ಪ್ರತಿ ವರ್ಷ ರಾಜ್ಯದ ಒಂದು ಕಾಲೇಜಿಗೆ ನೀಡುವ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯ ಅರ್ಹತೆಯನ್ನು ಅಂತಿಮಗೊಳಿಸುವ ಮೊದಲು ಯೋಜನೆಗಳ ಗುಣಮಟ್ಟ ಪ್ರಶಸ್ತಿ ಮತ್ತು ಇತರ ಅಂಶಗಳನ್ನು ಪರಿಶೀಲಿಸಲಾಯಿತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕಲಬುರಗಿಯ ಪ್ರಾದೇಶಿಕ ನಿರ್ದೇಶಕ ಪ್ರೊ. ಬಸವರಾಜ ಗದಗೆ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಸೇರಿದಂತೆ ಇತರ ಗಣ್ಯರು, ಐಐಎಸ್‌ಸಿಯ ಹಿರಿಯ ಅಧ್ಯಾಪಕರು ಹಾಗೂ ಕೆಎಸ್‌ಸಿಎಸ್‌ಟಿ ಕಾರ್ಯದರ್ಶಿ ಪ್ರೊ. ಅಶೋಕ್ ಎಂ. ರಾಯಚೂರು, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಯು. ಟಿ. ವಿಜಯ್ ಸೇರಿಕೊಂಡು, ದಯಾನಂದ ಸಾಗರ್ ಇಂಜಿನಿಯರಿಂಗ್ ಕಾಲೇಜಿಗೆ ಪ್ರತಿಷ್ಠಿತ ಪ್ರಶಸ್ತಿ ಲಭಿಸಿರುವುದಕ್ಕೆ ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್.ಜಿ. ಡೊಳ್ಳೇಗೌಡರ ಮತ್ತಿತರ ಗಣ್ಯರು ಕೈಜೋಡಿಸಿ ಅಭಿನಂದಿಸಿದರು.

25 ಅತ್ಯುತ್ತಮ ಪೋಸ್ಟರ್ ಪ್ರಶಸ್ತಿ ಯೋಜನೆಗಳು ಮತ್ತು 23 ಅತ್ಯುತ್ತಮ ಪ್ರದರ್ಶನ ಯೋಜನೆಗಳನ್ನು ಒಳಗೊಂಡಂತೆ ರಾಜ್ಯದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪ್ರಸ್ತುತಪಡಿಸಿದ ಒಟ್ಟು 48 ಅತ್ಯುತ್ತಮ ಪ್ರಾಜೆಕ್ಟ್‌ಗಳನ್ನು ಅಂತಿಮಗೊಳಿಸಿ ಗಣ್ಯರು ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ನೀಡಿದರು. ಬೆಂಗಳೂರಿನ ರಾಮಯ್ಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಹಾಗೂ ದಯಾನಂದ ಕಾಲೇಜ್ ಆಫ್ ಟೆಕ್ನಾಲಜಿ ಜೊತೆಗೂಡಿ ಅತ್ಯುತ್ತಮ ಪ್ರದರ್ಶನ ಕಾಲೇಜು ಪ್ರಶಸ್ತಿಯನ್ನು ಪಡೆದಿದ್ದು, ತಲಾ ಮೂರು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಅತ್ಯುತ್ತಮ ಯೋಜನೆಗಳಲ್ಲಿ ಗಮನ ಸೆಳೆದ ಶಿಕ್ಷಣ ಸಂಸ್ಥೆಗಳಲ್ಲಿ ಶರಣಬಸವ ವಿಶ್ವವಿದ್ಯಾಲಯ ಕಲಬುರಗಿ ಸೇರಿವೆ. ಆರ್ ವಿ ಎಂಜಿನಿಯರಿಂಗ್ ಕಾಲೇಜು ಬೆಂಗಳೂರು, ಜಿ ಎಂ ಇನ್ಸ್ಟಿಟ್ಯೂಟ್ ಟೆಕ್ನಾಲಜಿ, ದಾವಣಗೆರೆ, ಮಂಗಳೂರು ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಇಂಜಿನಿಯರಿಂಗ್ ಮೂಡಬಿದಿರೆ, ಸಹ್ಯಾದ್ರಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್, ಮಂಗಳೂರು, ಮತ್ತು ಬಿಎಲ್‌ಡಿಇಎ'ಸ ವಿ ಪಿ ಡಾ. ಪಿ ಜಿ ಹಲಕಟ್ಟಿ ಕಾಲೇಜ್ ಆಫ್ ಇಂಜಿನಿಯರಿಂಗ್ ಮತ್ತು ಟೆಕ್ನಾಲಜಿ ವಿಜಯಪುರ ತಲಾ ಎರಡು ಅತ್ಯುತ್ತಮ ಪ್ರಾಜೆಕ್ಟ್ ಪ್ರಶಸ್ತಿಗಳನ್ನು ಪಡೆದುಕೊಂಡವು.

47 ನೇ ಸರಣಿಯ ಎಸ್‌ಪಿಪಿ ವಾರ್ಷಿಕ ರಾಜ್ಯ ಮಟ್ಟದ ಪೋಸ್ಟರ್ ಪ್ರಶಸ್ತಿ ಮತ್ತು ಪ್ರಾಜೆಕ್ಟ್ ಎಕ್ಸಿಬಿಷನ್‌ಗೆ ಆಯ್ಕೆಯಾದ ಒಟ್ಟು 354 ಪ್ರಾಜೆಕ್ಟ್‌ಗಳಲ್ಲಿ 210 ಪ್ರಾಜೆಕ್ಟ್‌ಗಳನ್ನು ಕರ್ನಾಟಕದ ವಿವಿಧ ಭಾಗಗಳಿಂದ 142 ಕಾಲೇಜುಗಳಿಂದ ಪ್ರದರ್ಶನದಲ್ಲಿ ಪ್ರದರ್ಶಿಸಲಾಯಿತು ಮತ್ತು ಈ ಪ್ರಾಜೆಕ್ಟ್‌ಗಳನ್ನು ಸಿದ್ಧಪಡಿಸಿದ 350 ವಿದ್ಯಾರ್ಥಿಗಳು ತಮ್ಮ ಮಾರ್ಗದರ್ಶಕ-ಶಿಕ್ಷಕರೊಂದಿಗೆ ಪ್ರದರ್ಶಿಸಿದರು. ಪ್ರದರ್ಶನದಲ್ಲಿ ತೀರ್ಪುಗಾರರು ಈ ಎಲ್ಲಾ ಯೋಜನೆಗಳನ್ನು ವೀಕ್ಷಿಸಿದರು.

ಈ ಎರಡು ದಿನಗಳ ರಾಜ್ಯ ಮಟ್ಟದ ಮತ್ತುಪ್ರದರ್ಶನದಲ್ಲಿ ಆತಿಥೇಯ ಶರಣಬಸವ ವಿಶ್ವವಿದ್ಯಾಲಯವು ಪ್ರದರ್ಶಿಸಿದ ಅತ್ಯುತ್ತಮ ಸೌಕರ್ಯಗಳು ಮತ್ತು ಆತಿಥ್ಯಕ್ಕಾಗಿ ಹಾಗೂ ಎರಡು ದಿನಗಳ ಅವಧಿಯಲ್ಲಿ ಭಾಗವಹಿಸುವವರು ಮತ್ತು ಅತಿಥಿಗಳ ಪ್ರತಿಯೊಂದು ಅಗತ್ಯವನ್ನು ಕಾಳಜಿ ವಹಿಸಿದ್ದಕ್ಕಾಗಿ ಪ್ರೊಫೆಸರ್ ಅಶೋಕ್ ಎಂ ರಾಯಚೂರು ಮತ್ತು ಡಾ. ಯು ಟಿ ವಿಜಯ್ ಸೇರಿದಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳು ಪ್ರಶಂಸಿಸಿದರು.

ಈ ಸಮಾರಂಭದಲ್ಲಿ ಪ್ರೊ. ಬಸವರಾಜ ಗದಗೆಯವರು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಎರಡು ವರ್ಷಕ್ಕೊಮ್ಮೆಯಾದರೂ ಇಂತಹ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನವನ್ನು ಆಯೋಜಿಸಿ ಈ ಭಾಗದ ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಪ್ರೋತ್ಸಾಹಿಸುವಂತೆ ಕೆಎಸ್‌ಸಿಎಸ್‌ಟಿಯ ಅಧಿಕಾರಿಗಳಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಪ್ರೊ. ಅನಿಲಕುಮಾರ ಬಿಡವೆ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪ್ರೊ. ನಾಗಬಸಮ್ಮ ಗುರುಗೋಳ ವಂದಿಸಿದರು. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಡೈರೆಕ್ಟರ್ ಡಾ. ಎ. ಡಿ. ಮೈತ್ರಿ, ಕುಲಸಚಿವ ಪ್ರೊ. ಎಸ್. ಜಿ. ಡೊಳ್ಳೇಗೌಡರ, ಡೀನ್‌ಡಾ. ಲಕ್ಷ್ಮೀ ಪಾಟೀಲ್ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಪ್ರೊ. ಕಿರಣ್ ಮಾಕಾ ಸೇರಿದಂತೆ ಇತರ ಪ್ರಮುಖರು ವೇದಿಕೆ ಮೇಲಿದ್ದರು.

# ಗಾಜಾ ಶಾಲೆಯ ಮೇಲೆ ಇಸ್ರೇಲ್ ದಾಳಿ:ನೂರು ಮಂದಿ ಸಾವು

ಗಾಜಾ,ಆ.10:ಇಸ್ರೇಲ್ ಸೇನಾ ಪಡೆಗಳು ಗಾಜಾ ನಗರದ ಶಾಲೆಯ ಮೇಲೆ ದಾಳಿ ನಡೆಸಿದ್ದರಿಂದ 100 ಮಂದಿ ಸಾವನ್ನಪ್ಪಿದ್ದಾರೆ. ಇಸ್ರೇಲ್ ಸೇನಾಪಡೆ ಹಮಾಸ್ ಉಗ್ರರ ಕೇಂದ್ರಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿರುವುದಾಗಿ ತಿಳಿಸಿದೆ.

ಘಟನೆಯಲ್ಲಿ ಹಲವಾರು ಮಂದಿ ಗಾಯಗೊಂಡಿದ್ದು, ಪ್ಯಾಲೆಸ್ತೀನಿಯರಿಗೆ ವಸತಿ ವ್ಯವಸ್ಥೆ ಕಲ್ಪಿಸಿದ್ದ ಶಾಲಾ ಕಟ್ಟಡದ ಮೇಲೆ ಇಸ್ರೇಲ್ ಸೇನಾ ಪಡೆಗಳು ರಾಕೆಟ್ ಅಪ್ಪಳಿಸಿದವು ಎಂದು ರಕ್ಷಣಾ ವಕ್ತಾರ ಮಹ್ಮದ್ ಭಾಸಲ್ ಮಾಹಿತಿ ನೀಡಿದ್ದಾರೆ. ದಾಳಿಯಲ್ಲಿ 100ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದಾರೆಂದು ಗಾಜಾದ ಸರ್ಕಾರಿ ಮಾಧ್ಯಮ ಕಚೇರಿ ದೃಢಪಡಿಸಿದೆ. ಕೆಲವು ದೇಹಗಳು ಬೆಂಕಿಯಲ್ಲಿ ಬೇಯುತ್ತಿದ್ದು, ಭಯಾನಕ ಹತ್ಯಾಕಾಂಡಕ್ಕೆ ಸಾಕ್ಷಿಯಾಗಿದೆ.

ಶವಗಳನ್ನು ಹೊರ ತೆಗೆಯಲು ಹಾಗೂ ಗಾಯಾಳುಗಳನ್ನು ರಕ್ಷಿಸಲು ಸಿಬ್ಬಂದಿ ಪರಿಹಾರ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಇಸ್ರೇಲ್ ಸೇನೆ ಈ ಬಗ್ಗೆ ಪ್ರತಿಕ್ರಿಯೆ ನೀಡಿದ್ದು, ಶಾಲೆಯ ಕಟ್ಟಡದಲ್ಲಿ ಅಡಗಿರುವ ಹಮಾಸ್ ಕಮಾಂಡ್ ಮತ್ತು ಅದರ ನಿಯಂತ್ರಣ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಮಾಸ್ ಉಗ್ರರನ್ನು ಗುರಿಯಾಗಿಸಿಕೊಂಡು ದಾಳಿ ಮಾಡಲಾಗಿದೆ.

ಗಾಜಾನಗರದ 2 ಶಾಲೆಗಳ ಮೇಲೆ ಇಸ್ರೇಲ್ ದಾಳಿ ಮಾಡಿದ್ದು, 18ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು. ಇದರ ಬೆನ್ನಲ್ಲೇ ಹಮಾಸ್ ಕಮಾಂಡ್ ಸೆಂಟರ್‌ಗಳ ಮೇಲೆ ದಾಳಿ ನಡೆಸಿರುವುದಾಗಿ ಇಸ್ರೇಲ್ ಸೇನೆ ತಿಳಿಸಿತ್ತು.

